# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 19-03-2021 ಪ್ರಶ್ನೆ ಸಂಖ್ಯೆ : 1430 (1649)

0ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಗೋವಿಂದರಾಜು (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾ.ದ ದಿನಾಂಕ : 19-03-2021

ಉತ್ತರಿಸುವ ಸಚಿವರು: ಮಾನ್ಯ ಉಪ ಮುಖ್ಯಮಂತ್ರಿಯವರು ಹಾಗೂ ಸಾರಿಗೆ ಸಚಿವರು

ವಿಷಯ : ವಾಹನ ಪರಿವೀಕ್ಷಕರಾಗಿ ಮಂಜೂರಾಗಿರುವ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು

(ಅ) ರಾಜ್ಯದ ಮೋಟಾರು ವಾಹನ ಇಲಾಖೆಯ ವಾಹನ ಪರಿವೀಕ್ಷಕರಾಗಿ ಮಂಜೂರಾಗಿರುವ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಆ) ಮೋಟಾರು ವಾಹನ ಇಲಾಖೆಯಲ್ಲಿ ವಾಹನ ಪರಿವೀಕ್ಷಕರ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಹುದ್ದೆಗಳು ಯಾವ ಸಾಲಿನಿಂದ ಖಾಲಿ ಇವೆ;

(ಇ) ಸದರಿ ಹುದ್ದೆಗಳನ್ನು ಈ ಹಿಂದೆ ಯಾವ ಸಾಲಿನಲ್ಲಿ ನೇಮಕಾತಿ ಮಾಡಿಕೊಳ್ಳಲಾಗಿತ್ತು;

(ಈ) ಪ್ರಸ್ತುತ ಇದುವರೆವಿಗೂ ಈ ಹುದ್ದೆಗಳಿಗೆ ನೇಮಕಾತಿ ಮಾಡದೇ ಇರಲು ಕಾರಣಗಳೇನು;

(ಉ) ಕೋಲಾರ ಜಿಲ್ಲೆಯಲ್ಲಿ ಮೋಟಾರು ವಾಹನ ಪರಿವೀಕ್ಷಕರ ಹುದ್ದೆಗಳು ಖಾಲಿ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ನಿಜವೇ;

(ಊ) ಹಾಗಿದ್ದಲ್ಲಿ, ಈ ಖಾಲಿ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ತುಂಬಲಾಗುವುದು? (ವಿವರಗಳನ್ನು ನೀಡುವುದು)